c) In view of replies given to question B, this question does not arise.

ವಿಷಯ: ಜಿಲ್ಲಾ ಪಂಚಾಯತ್‌ಗಳ ವಿಂಗಡಣೆ

2486 (3900)

ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲೆಗಳ ವಿಂಗಡಣೆಯಾಗುವಾಗ ಜಿಲ್ಲಾ ಪಂಚಾಯತ್‌ಗಳ ವಿಂಗಡಣೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಜಿಲ್ಲಾ ಪಂಚಾಯತ್ ಸದಸ್ಯರನ್ನು ಯಾವ ನೆಲೆಯಲ್ಲಿ ಜೇರ್ಪಡಿಸಲಾಗುವುದು? ಇದಕ್ಕೇನಾದರೂ ತೊಂದರೆಯಿದೆಯೇ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ಹೌದು

ಆ) ಹೊಸ ಜಿಲ್ಲೆಯಲ್ಲಿ ಸೇರ್ಪಡೆಯಾದ ಪ್ರದೇಶದ ಪೂರ್ಣ ಅಥವಾ ಬಹು ಭಾಗವು ಇರುವ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳನ್ನು ಪ್ರತಿನಿಧಿಸುವ ಜಿಲ್ಲಾ ಪಂಚಾಯಿತಿಯ ಸದಸ್ಯನು ಅಂತಹ ಜಿಲ್ಲಾ ಪಂಚಾಯಿತಿ ಸದಸ್ಯನಾಗಿ ತನ್ನ ಅವಧಿ ಮುಗಿಯುವವರೆಗೆ ಮುಂದುವರೆಯುತ್ತಾನೆ. ಈ ಕ್ರಮ ಕೈಗೊಳ್ಳಲು ಯಾವುದೇ ತೊಂದರೆ ಇರುವುದಿಲ್ಲ.

ವಿಷಯ: ಪಾಂಡವಪುರ ಕ್ಷೇತ್ರದಲ್ಲಿ ಹಂದಿಗಳ ಹಾವಳಿ

2487 (3194)

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ): ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹಂದಿ ಮತ್ತು ಆನೆಗಳಿಂದ ಕೃಷಿ ಕ್ಷೇತ್ರದ ಬೆಳೆಗಳ ನಾಶದ ಬಗ್ಗೆ ಕಳೆದ ಶಾಸನ ಸಭೆಯಲ್ಲಿ ಚರ್ಚೆಯಾಗಿದ್ದು ಸರ್ಕಾರವು ಇದುವರೆವಿಗೂ ಕೈಗೊಂಡ ಕ್ರಮಗಳೇನು?

2) ಪಾಂಡವಪುರ ಕ್ಷೇತ್ರದಲ್ಲಿ ಪುನಃ ಹಂದಿಗಳ ಕಾಟ ಜಾಸ್ತಿಯಾಗಿದ್ದು ಈ ಹಂದಿಗಳ ಹಾವಳಿಯನ್ನು ಕಡಿಮೆ ಮಾಡಲು ಸಾಧ್ಯವಿಲ್ಲದಿದ್ದರೆ ಇವುಗಳಿಂದ ಉಂಟಾದ ರೈತರ ಬೆಳೆಗಳ ನಷ್ಟಕ್ಕೆ ಪರಿಹಾರ ಕೊಡುವ ಆಲೋಚನೆ ಸರ್ಕಾರದ ಮುಂದಿದೆಯೇ?